# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :-** ಜಗಳೂರು ತಾಲ್ಲೂಕಿಗೆ ಭದ್ರಾ ಮೇಲ್ದಂಡೆ ಯೋಜನೆ ಅಡಿಯಲ್ಲಿ ಹಾಗೂ ಇತರ ಯೋಜನೆಗಳಲ್ಲಿ ಹಂಚಿಕೆಯಾದ ನೀರನ್ನು ಒದಗಿಸುವ ಬಗ್ಗೆ.

***

**ಓದಲಾಗಿದೆ:-** 1. ಸರ್ಕಾರದ ಆದೇಶ ಸಂಖ್ಯೆ: ಜಸಂಇ 53 ವಿಬ್ಯಾಇ 2014, ದಿನಾಂಕ: 06/03/2015.

2. ಸರ್ಕಾರದ ಆದೇಶ ಸಂಖ್ಯೆ ಜಸಂಇ 205 ವಿಬ್ಯಾಇ 2017 ದಿನಾಂಕ: 12/12/2017
3. ಪತ್ರ ಸಂಖ್ಯೆ: ಮುಇಂಚಿ/ವಿಜನಿನಿ/ಭಮೇಯೋವ/ತಾಂ.ಶಾ-2/ ಜೆಬಿಸಿ/2019-20/2466 ದಿನಾಂಕ: 10/12/2019
4. ಪತ್ರ ಸಂಖ್ಯೆ: ಜಸಂಇ 205 ವಿಬ್ಯಾಇ 2017 ದಿನಾಂಕ: 30/01/2020
5. ಪತ್ರ ಸಂಖ್ಯೆ: ವಿಜನಿನಿ/ತಾಂವಿ/ತಾಂಸ-1/ಸಇಂ-3/2020-21/ 916 ದಿನಾಂಕ: 19/08/2020.

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಭದ್ರಾ ಮೇಲ್ದಂಡೆ ಯೋಜನೆಯ ಪರಿಷ್ಕೃತ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಸದರಿ ಯೋಜನೆಯ ವಿವರವಾದ ಯೋಜನಾ ವರದಿಯ ಅನುಸಾರ ಯೋಜನೆಗೆ ಒಟ್ಟು 29.90 ಟಿ.ಎಂ.ಸಿ. ನೀರಿನ ಹಂಚಿಕೆ ಒದಗಿಸಲಾಗಿದ್ದು, ಇದರಲ್ಲಿ ಜಗಳೂರು ತಾಲ್ಲೂಕಿಗೆ 1.16 ಟಿ.ಎಂ.ಸಿ. ನೀರನ್ನು ನೀರಾವರಿ ಮತ್ತು ಕೆರೆ ತುಂಬಿಸುವ ಉದ್ದೇಶಕ್ಕೆ ಹಂಚಿಕೆ ಮಾಡಲಾಗಿರುತ್ತದೆ.

ಭದ್ರಾ ಮೇಲ್ದಂಡೆ ನೀರಾವರಿ ಹೋರಾಟ ಸಮಿತಿಯು ಜಗಳೂರು ಶಾಖಾ ಕಾಲುವೆಯ ಈಗ ರೂಪಿಸಿರುವ ಪಥದ ಬದಲು ನೀರನ್ನು ಚಿತ್ರದುರ್ಗ ಶಾಖಾ ಕಾಲುವೆ ಕಿ.ಮೀ.120ರ ಬೆಳಗಟ್ಟೆ ಗ್ರಾಮದಿಂದ ಸಂಗೇನಹಳ್ಳಿ ಕೆರೆಗೆ ನೀರು ತುಂಬಿಸಲು ಪಥವನ್ನು ರೂಪಿಸುವಂತೆ ಮತ್ತು ಜಗಳೂರು (1.86 ಟಿ.ಎಂ.ಸಿ) ಹಾಗೂ ಪಾವಗಡ (0.54 ಟಿ.ಎಂ.ಸಿ) ತಾಲ್ಲೂಕುಗಳಿಗೆ ಪೋಲವರಂ ನೀರು ಹಂಚಿಕೆಯಲ್ಲಿ ನಿಗದಿಯಾಗಿರುವ ಒಟ್ಟಾರೆ 2.40 ಟಿ.ಎಂ.ಸಿ. ನೀರನ್ನು ಸಂಪೂರ್ಣವಾಗಿ ಜಗಳೂರು ತಾಲ್ಲೂಕಿಗೆ ಹಂಚಿಕೆ ಮಾಡುವಂತೆ ಬೇಡಿಕೆಯನ್ನು ಪ್ರಸ್ತುತ ಪಡಿಸಿರುತ್ತಾರೆ.

ಈ ಕುರಿತಂತೆ ದಿನಾಂಕ: 03/11/2017 ರಂದು ಸನ್ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಮೇಲ್ಕಂಡ ಬೇಡಿಕೆಯನ್ನು ಪರಿಶೀಲಿಸಿ, ಸೂಕ್ತ ಶಿಫಾರಸ್ಸು ಮಾಡಲು ತಾಂತ್ರಿಕ ತಜ್ಞರು, ಅಧಿಕಾರಿಗಳು ಮತ್ತು ಭದ್ರಾ ಮೇಲ್ದಂಡೆ ನೀರಾವರಿ ಹೋರಾಟ ಸಮಿತಿಯ ಕೆಲವು ಸದಸ್ಯರುಗಳನ್ನು ಒಳಗೊಂಡ ಸಮಿತಿಯನ್ನು ರಚಿಸಲು ತೀರ್ಮಾನಿಸಲಾಗಿರುತ್ತದೆ. ಅದರಂತೆ ಮೇಲೆ (2) ರಲ್ಲಿ ಓದಲಾದ ಆದೇಶದಲ್ಲಿ ಸಮಿತಿಯನ್ನು ರಚಿಸಲಾಗಿರುತ್ತದೆ.

ಮೇಲೆ ಓದಲಾದ (3)ರ ಪತ್ರದಲ್ಲಿ ಮುಖ್ಯ ಇಂಜಿನಿಯರ್, ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ, ಚಿತ್ರದುರ್ಗ ಹಾಗೂ ಸದಸ್ಯ ಕಾರ್ಯದರ್ಶಿ, ತಜ್ಞರ ಸಮಿತಿ ಇವರು ಸದರಿ ತಜ್ಞರ ಸಮಿತಿಯ ಸಭೆಯು ದಿನಾಂಕ: 20/12/2017 ಮತ್ತು 25/11/2019 ರಂದು ಜರುಗಿಸಲಾಗಿದೆ ಎಂದು ತಿಳಿಸುತ್ತಾ ಸಮಿತಿಯ ಅಂತಿಮ ವರದಿಯನ್ನು ಸರ್ಕಾರದ ಒಪ್ಪಿಗೆಗಾಗಿ ಸಲ್ಲಿಸಿರುತ್ತಾರೆ.

ಅನುಮೋದನೆಗೊಂಡಿರುವ ತಜ್ಞರ ಸಮಿತಿಯ ಅಂತಿಮ ವರದಿಯನ್ವಯ ನಿಯಮಾನುಸಾರ ಅಗತ್ಯ ಕ್ರಮ ವಹಿಸಲು ಮೇಲೆ ಓದಲಾದ 4 ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ ಇವರಿಗೆ ತಿಳಿಸಲಾಗಿತ್ತು.

ವ್ಯವಸ್ಥಾಪಕ ನಿರ್ದೇಶಕರು, ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ ಇವರು ಮೇಲೆ ಓದಲಾದ 5 ರ ಪತ್ರದಲ್ಲಿ ಮುಖ್ಯ ಇಂಜಿನಿಯರ್, ಭದ್ರಾ ಮೇಲ್ದಂಡೆ ಯೋಜನಾ ವಲಯ, ಚಿತ್ರದುರ್ಗ ರವರು ತಜ್ಞರ ಸಮಿತಿಯ ಅಂತಿಮ ವರದಿಯನ್ವಯ ಜಗಳೂರು ತಾಲ್ಲೂಕಿಗೆ ಪ್ರತ್ಯೇಕವಾಗಿ 2.40 ಟಿ.ಎಂ.ಸಿ. ನೀರಿನ ಹಂಚಿಕೆ ಮಾಡಿ ಆದೇಶ ನೀಡುವಂತೆ ಕೋರಿರುವುದಾಗಿ ತಿಳಿಸುತ್ತಾ, ಸದರಿ ವಿಷಯದ ಬಗ್ಗೆ ಸೂಕ್ತ ನಿರ್ದೇಶನ ನೀಡುವಂತೆ ಕೋರಿರುತ್ತಾರೆ.

ಭದ್ರಾ ಮೇಲ್ದಂಡೆ ಯೋಜನೆಯಡಿಯಲ್ಲಿ ಕೆರೆಗಳಿಗೆ ನೀರು ತುಂಬಿಸಲು 8.86 ಟಿ.ಎಂ.ಸಿ ನೀರು ಲಭ್ಯವಿದ್ದು, ಜಗಳೂರು ತಾಲೂಕಿಗೆ ತಜ್ಞರ ಸಮಿತಿಯ ವರದಿಯನ್ವಯ 1.24 ಟಿ.ಎಂ.ಸಿ. ನೀರನ್ನು ಹಂಚಿಕೆ ಮಾಡಿದರೆ ಉಳಿದ 7.26 ಟಿ.ಎಂ.ಸಿ. ನೀರಿನ ಪ್ರಮಾಣದಲ್ಲಿ 362 ಕೆರೆಗಳಿಗೆ ಅವುಗಳ ಸಾಮರ್ಥ್ಯದ ಸುಮಾರು ಶೇಕಡಾ 50ರಷ್ಟು ತುಂಬಿಸಬಹುದಾಗಿದೆ ಎಂಬುದಾಗಿ ಮುಖ್ಯ ಇಂಜಿನಿಯರ್, ಭದ್ರಾ ಮೇಲ್ದಂಡೆ ಯೋಜನಾ ವಲಯ, ಚಿತ್ರದುರ್ಗ ರವರು ವರದಿ ಮಾಡಿರುತ್ತಾರೆ.

ಅದರಂತೆ ಪ್ರಸ್ತಾವನೆಯಲ್ಲಿನ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 102 ವಿಬ್ಯಾಇ 2020, ಬೆಂಗಳೂರು,**
**ದಿನಾಂಕ: 19.01.2021**

ಜಗಳೂರು ತಾಲ್ಲೂಕಿಗೆ ಭದ್ರಾ ಮೇಲ್ದಂಡೆ ಯೋಜನೆಯಡಿಯಲ್ಲಿ ಹಾಗೂ ಇತರೆ ಯೋಜನೆಗಳಡಿಯಲ್ಲಿ ಹಂಚಿಕೆಯಾದ ನೀರನ್ನು ಒದಗಿಸುವ ಬಗ್ಗೆ ಪರಿಶೀಲಿಸಲು ರಚಿಸಲಾಗಿರುವ ತಜ್ಞರ ಸಮಿತಿಯ ಅಂತಿಮ ವರದಿಯ ಶಿಫಾರಸ್ಸಿನ ಮೇರೆಗೆ, ಭದ್ರಾ ಮೇಲ್ದಂಡೆ ಯೋಜನೆಯಡಿ ಜಗಳೂರು ತಾಲ್ಲೂಕಿಗೆ ನೀರಾವರಿ ಮತ್ತು ಕೆರೆ ತುಂಬುವ ಸಲುವಾಗಿ ಒಟ್ಟಾರೆ 2.40 ಟಿ.ಎಂ.ಸಿ. ನೀರನ್ನು (ಯೋಜನಾ ವರದಿಯಲ್ಲಿ ಜಗಳೂರು ತಾಲ್ಲೂಕಿಗೆ ಹಂಚಿಕೆ ಮಾಡಲಾದ 1.16 ಟಿ.ಎಂ.ಸಿ. - ಕೆರೆಗಳಿಗೆ ಅವುಗಳ ಸಾಮರ್ಥ್ಯ ಶೇಕಡಾ 50ರಷ್ಟು ತುಂಬಿಸಲು ಹಂಚಿಕೆಯಾದ ಒಟ್ಟಾರೆ 8.86 ಟಿ.ಎಂ.ಸಿ. ಪೈಕಿ 1.24 ಟಿ.ಎಂ.ಸಿ.) ಪುನರ್ ಹಂಚಿಕೆ ಮಾಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

19/1/2021
**(ರವೀಂದ್ರ ಕೊಂಡ)**
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-4)
ಜಲ ಸಂಪನ್ಮೂಲ ಇಲಾಖೆ

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರು (ಗ್ರೇಡ್-1), ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.

3. ವ್ಯವಸ್ಥಾಪಕ ನಿರ್ದೇಶಕರು, ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ, ಬೆಂಗಳೂರು
4. ಪ್ರಧಾನ ಇಂಜಿನಿಯರ್, ಜಲ ಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಭದ್ರಾ ಮೇಲ್ದಂಡೆ ಯೋಜನೆ, ಚಿತ್ರದುರ್ಗ.
6. ಹೆಚ್ಚುವರಿ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
7. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ವಿಶೇಷ ಕರ್ತವ್ಯಾಧಿಕಾರಿಗಳು (ತಾಂತ್ರಿಕ-3), ಜಲ ಸಂಪನ್ಮೂಲ ಇಲಾಖೆ.
9. ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-5) ಜಲ ಸಂಪನ್ಮೂಲ ಇಲಾಖೆ.
10. ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿಗಳು.